**<u>ದಿನಾಂಕ 12-03-2026 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಶ್ರೀ.ಎನ್.ವಿ.ಆರ್ ವಾದಿ ಪರ ವಕೀಲರಿಂದಃಃ</u>**

ನಾನು ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದು, ಅವುಗಳನ್ನು ನಾನು ನೋಡಿ ಗುರುತಿಸಿದ್ದು , ನಂತರ ಈ ಕೆಳಕಂಡಂತೆ ದಾಖಲಾತಿಗಳನ್ನು ಗುರುತಿಸಲಾಯಿತು.

1. ಸಾಕ್ಷಿಯು ಮೂರು ಆಧಾರ್ ಕಾರ್ಡ್ ಮತ್ತು 4 ಚುನಾವಣಾ ಗುರುತಿನ ಚೀಟಿಯನ್ನು ನೋಡಿ ಗುರುತಿಸಿದ್ದು , ಅವುಗಳನ್ನು ನಿಡಿ-1 ರಿಂದ ನಿಡಿ-7 ಎಂದು ಗುರುತಿಸಲಾಯಿತು.

2. ಸಾಕ್ಷಿಯು ಒಂದು ಆಹ್ವಾನ ಪತ್ರಿಕೆಯನ್ನು ನೋಡಿ ಗುರುತಿಸಿದ್ದು , ಅದನ್ನು ನಿಡಿ 8 ಎಂದು ಗುರುತಿಸಲಾಯಿತು.

3. ಸಾಕ್ಷಿಯು ಶಾಲಾ ವ್ಯಾಸಂಗ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು , ಅದನ್ನು ನಿಡಿ 9 ಎಂದು ಗುರುತಿಸಲಾಯಿತು.

4. ಸಾಕ್ಷಿಯು ಒಂದು ಮರಣ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು , ಅದನ್ನು ನಿಡಿ 10 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ವಜಾಮಾಡಬೇಕೆಂದು ಕೋರಿರುತ್ತಾರೆ.

**ಪಾಟೀ ಸವಾಲುಃ ವಾದಿ ಪರ ವಕೀಲರು ಪಾಟೀಸವಾಲಿಗೆ ಸಮಯ ಕೋರಿದ್ದು ಸಮಯಾವಕಾಶ ನೀಡಲಾಯಿತು.**

(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು**).

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.